## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1278 |
| ಸದಸ್ಯರ ಹೆಸರು | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 21/12/2018 |
| ಉತ್ತರಿಸುವವರು | ಪೌರಾಡಳಿತ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ಬೀದರ ನಗರಸಭೆ ವ್ಯಾಪ್ತಿಯಲ್ಲಿ ಘನತ್ಯಾಜ್ಯ ವಸ್ತುಗಳ ವಿಲೇವಾರಿ ಘಟಕಗಳನ್ನು ನಿರ್ಮಿಸುವ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ. |
| ಆ) | ಇದ್ದಲ್ಲಿ ಯಾವಾಗ ನಿರ್ಮಿಸಲಾಗುವುದು? | ಬೀದರ್ ನಗರಸಭೆ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುವ ಘನತ್ಯಾಜ್ಯ ವಸ್ತುಗಳನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ;<br>▪ ಬೀದರ ನಗರಸಭೆ ವ್ಯಾಪ್ತಿಯ ಸುಲ್ತಾನಪೂರ (ಜೆ) ಗ್ರಾಮದ ಹತ್ತಿರ ಒಟ್ಟು 24 ಎಕರೆ ಜಮೀನು ಘನತ್ಯಾಜ್ಯ ವಿಲೇವಾರಿ ಘಟಕ ನಿರ್ಮಾಣ ಮಾಡಲು ಖರೀದಿಸಲಾಗಿರುತ್ತದೆ. ಸದರಿ ನೆಲಭರ್ತಿ ಜಾಗದಲ್ಲಿ ನಡೆಸುತ್ತಿರುವ ಕಾರ್ಯಗಳ ವಿವರ ಈ ಕೆಳಕಂಡಂತೆ ಇರುತ್ತದೆ.<br>▪ ಕಸವನ್ನು ಸಂಸ್ಕರಿಸಲು ವಿನ್ಡ್‌ರೋ ಪ್ಲಾಟ್ ಫಾರಂ (ಅಳತೆ 60.95 X 45.75 ಮೀ.) ಹಾಗೂ ಶೆಡ್ (ಅಳತೆ 24.59 X 45.73 ಮೀ.) ನಿರ್ಮಾಣ ಮಾಡಲಾಗಿದೆ.<br>▪ ದಿನಂಪ್ರತಿ ಸಂಸ್ಕರಣಾ ಘಟಕದಲ್ಲಿ ಸ್ವೀಕೃತಗೊಳ್ಳುವ ಘನತ್ಯಾಜ್ಯವನ್ನು ಜೈವಿಕವಾಗಿ ಸಂಸ್ಕರಣೆ ಮಾಡಲು ಕಲ್ಚರ್ ದ್ರಾವಣವನ್ನು ಸಿಂಪಡಿಸಲಾಗುತ್ತಿದೆ.<br>▪ ಯಂತ್ರದ ಸಂಸ್ಕರಣೆ ಸಾಮರ್ಥ್ಯವನ್ನು ಹೆಚ್ಚಿಸಲು ಅವಶ್ಯಕವಿರುವ ರ್‍ಯಾಂಪ್ ವ್ಯವಸ್ಥೆ ಮಾಡಲಾಗಿದೆ.<br>ನಿಸತ್ವ ತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಲು ಸ್ಯಾನಿಟರಿ ಲ್ಯಾಂಡ್ ಫಿಲ್ ಅಭಿವೃದ್ಧಿ ಪಡಿಸಲಾಗಿದೆ. ಇದಲ್ಲದೆ, ಪ್ರತಿದಿನ ನಗರದಲ್ಲಿ ಉತ್ಪತ್ತಿಯಾಗುತ್ತಿರುವ ಸಂಪೂರ್ಣ ತ್ಯಾಜ್ಯವನ್ನು ವೈಜ್ಞಾನಿಕವಾಗಿ ಸಂಸ್ಕರಿಸಿ, ವಿಲೇವಾರಿ ಮಾಡಲು ಎಸ್.ಬಿ.ಎಂ ಯೋಜನೆಯಡಿ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಲಾಗಿರುತ್ತದೆ. ಸದರಿ ವಿಸ್ತೃತ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ತಾಂತ್ರಿಕ ಮಂಜೂರಾತಿ ನೀಡುವ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಟೆಂಡರ್ ಆಹ್ವಾನಿಸಿ ಯೋಜನೆ ಅನುಷ್ಠಾನಗೊಳಿಸಲಾಗುವುದು. |

ಸಂಖ್ಯೆ: ನಅಇ 295 ಜಿಇಎಲ್ 2018

(ರಮೇಶ್ ಲ. ಜಾರಕಿಹೊಳಿ)
ಪೌರಾಡಳಿತ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು.